ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ    ದಿನಾಂಕ : DATE : 04/07/2019

# ವಿಚಾರಣೆ ಮಾಡಿಯೇ ರಾಜೀನಾಮೆ ಅಂಗೀಕಾರ

4-7-19, ಪು. 8

ಸಂ.ಕ. ಸಮಾಚಾರ ಬೆಂಗಳೂರು

ವಿಜಯನಗರ ಶಾಸಕ ಆನಂದಸಿಂಗ್ ರಾಜೀನಾಮೆ ಮಾತ್ರ ತಮಗೆ ತಲುಪಿದ್ದು, ಸಾರ್ವಜನಿಕ ವಿಚಾರಣೆ ಮೂಲಕ ಅಂಗೀಕಾರದ ಬಗ್ಗೆ ತೀರ್ಮಾನಿಸಲಾಗುವುದು ಎಂದು ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಹೇಳಿದ್ದಾರೆ.



ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕೆಲವರು ಫ್ಯಾಕ್ಸ್ ಮೂಲಕ ರಾಜೀನಾಮೆ ಕಳುಹಿಸಿದ್ದಾರೆ. ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿ ಇಲ್ಲ ಎಂದು ರಮೇಶ್ ಜಾರಕಿಹೊಳಿ ಅವರು ಫ್ಯಾಕ್ಸ್ ಮೂಲಕ ರಾಜೀನಾಮೆ ಸಲ್ಲಿಸಿರುವುದಾಗಿ ಹೇಳಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದರು.

ಆನಂದ್‌ಸಿಂಗ್ ರಾಜೀನಾಮೆ ಪತ್ರ ತಲುಪಿದೆ. ಸೋಮವಾರ ಬೆಳಗ್ಗೆ 6.30ಕ್ಕೆ ದೊಮ್ಮಲೂರಿನಲ್ಲಿರುವ ನನ್ನ ಮನೆಗೆ ಬಂದು ರಾಜೀನಾಮೆ ಸಲ್ಲಿಸಿದ್ದಾರೆ. ನಿಯಮಗಳ ಪ್ರಕಾರ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದೇನೆ. ಬೇರೆ ಯಾವ ಶಾಸಕರೂ ರಾಜೀನಾಮೆ ನೀಡಿಲ್ಲ ಎಂದು ಹೇಳಿದ ಅವರು, ಚಿಂಚೋಳಿ ಶಾಸಕರಾಗಿದ್ದ ಉಮೇಶ್ ಜಾಧವ್ ರಾಜೀನಾಮೆ ಅಂಗೀಕರಿಸಿದ ರೀತಿಯಲ್ಲಿಯೇ, ಆನಂದ್ ಸಿಂಗ್ ರಾಜೀನಾಮೆಗೆ ಕಾರಣವೇನು. ಯಾವುದಾದರೂ ಒತ್ತಡಕ್ಕೆ ಮಣಿದಿದ್ದಾರಾ ಎನ್ನುವ ಬಗ್ಗೆ ಸಾರ್ವಜನಿಕವಾಗಿ 'ಅವರನ್ನು ವಿಚಾರಣೆ ಮಾಡಿ, ಮುಂದಿನ ತೀರ್ಮಾನ ಕೈಗೊಳ್ಳುತ್ತೇನೆ. ಸಂವಿಧಾನದ ಅಡಿಯಲ್ಲಿ ಯಾವುದೇ ಪಕ್ಷಪಾತವಿಲ್ಲದೇ ಕ್ರಮ ಕೈಗೊಳ್ಳುತ್ತೇನೆ. ಇಷ್ಟೇ ದಿನದಲ್ಲಿ ರಾಜೀನಾಮೆ ಬಗ್ಗೆ ತೀರ್ಮಾನ ತೆಗೆದುಕೊಳ್ಳಬೇಕೆಂದು ನಿಯಮವೇನಿಲ್ಲ. ಕಾನೂನು ಬದ್ಧವಾಗಿ ಶೀಘ್ರ ತೀರ್ಮಾನ ತೆಗೆದುಕೊಳ್ಳುವುದಾಗಿ ತಿಳಿಸಿದರು.

ಗೋಕಾಕ್ ಶಾಸಕ ರಮೇಶ್ ಜಾರಕಿಹೊಳಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಅವರು, ಫ್ಯಾಕ್ಸ್ ಮೂಲಕ ರಾಜೀನಾಮೆ ನೀಡಲು ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿಲ್ಲ. ಮಾಧ್ಯಮಗಳಲ್ಲಿ ಮಾತನಾಡುವ ಮುನ್ನ ಎಚ್ಚರಿಕೆಯಿಂದ ಮಾತನಾಡಲಿ. ದನಗಳ ರೀತಿಯಲ್ಲಿ ನಾನು ವರ್ತನೆ ಮಾಡಲು ಆಗುವುದಿಲ್ಲ. ಸಂವಿಧಾನದ ನೀತಿ ನಿಯಮಗಳನ್ನು ಮೊದಲು ತಿಳಿದುಕೊಳ್ಳಲಿ ಎಂದು ಆಕ್ರೋಶ ವ್ಯಕ್ತಪಡಿಸಿದರು.